# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 67(755) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 18.08.2025 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಒಟ್ಟು ವಿಶ್ವವಿದ್ಯಾನಿಲಯಗಳ ಸಂಖ್ಯೆಯ ಎಷ್ಟು; ವಿವರ ನೀಡುವುದು. | ರಾಜ್ಯದಲ್ಲಿ ಒಟ್ಟು 87 ವಿಶ್ವವಿದ್ಯಾಲಯಗಳಿವೆ. ಇವುಗಳಲ್ಲಿ ಸಾರ್ವಜನಿಕ, ಖಾಸಗಿ ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳಿದ್ದು, ವಿವರಗಳು ಈ ಕೆಳಕಂಡಂತಿವೆ. (ಕೋಷ್ಟಕ ಕೆಳಗೆ) |

| ಕ್ರ. ಸಂ. | ವಿಶ್ವವಿದ್ಯಾಲಯದ ವಿವರ | ಸಂಖ್ಯೆ |
|---|---|---|
| 01 | ಸಾರ್ವಜನಿಕ | 32 |
| 02 | ಖಾಸಗಿ | 29 |
| 03 | ಡೀಮ್ಡ್ | 15 |
| 04 | ಕೇಂದ್ರ ವಿಶ್ವವಿದ್ಯಾಲಯ | 01 |
| 05 | ಇತರೆ ಇಲಾಖೆಗಳ ಅಧೀನದಲ್ಲಿರುವ ವಿಶ್ವವಿದ್ಯಾಲಯಗಳು | 10 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಆ) | ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ವಿಶ್ವವಿದ್ಯಾಲಯಗಳಿವೆ; | ಬೆಂಗಳೂರು ನಗರ ಜಿಲ್ಲೆಯಲ್ಲಿ ಸಾರ್ವಜನಿಕ, ಖಾಸಗಿ, ಡೀಮ್ಡ್-ಟು-ಬಿ, ಕೇಂದ್ರೀಯ ವಿಶ್ವವಿದ್ಯಾಲಯವನ್ನು ಒಳಗೊಂಡಂತೆ ಒಟ್ಟು 23 ವಿಶ್ವವಿದ್ಯಾಲಯಗಳಿವೆ. |
| (ಇ) | ಸರ್ಕಾರದ ಅಧೀನದಲ್ಲಿರುವ ಒಟ್ಟು ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; | ಇತರೆ ಶಿಕ್ಷಣ ಸಂಸ್ಥೆಗಳ ವ್ಯಾಪ್ತಿಯಲ್ಲಿನ ವಿಶ್ವವಿದ್ಯಾಲಯಗಳನ್ನು ಹೊರತು ಪಡಿಸಿ ಉಳಿದಂತೆ, ಸರ್ಕಾರದ ಅಧೀನದಲ್ಲಿ ಒಟ್ಟು 32 ಸಾರ್ವಜನಿಕ ವಿಶ್ವವಿದ್ಯಾಲಯಗಳಿವೆ. |
| (ಈ) | ಹಿಂದಿನ ಸರ್ಕಾರದಲ್ಲಿ ಜಿಲ್ಲೆಗೊಂದರಂತೆ ಎಷ್ಟು ಹೊಸ ವಿಶ್ವವಿದ್ಯಾನಿಲಯಗಳನ್ನು ತೆರೆಯಲಾಗಿವೆ; ಈ ವಿಶ್ವವಿದ್ಯಾನಿಲಯಗಳನ್ನು ಯಾವ ಮಾನದಂಡಗಳನ್ನು ಅನುಸರಿಸಿ ಪ್ರಾರಂಭಿಸಲಾಗಿದೆ; (ವಿವರ ನೀಡುವುದು) | ಹಿಂದಿನ ಸರ್ಕಾರದಲ್ಲಿ ಜಿಲ್ಲೆಗೊಂದರಂತೆ, ಹೊಸ ವಿಶ್ವವಿದ್ಯಾಲಯಗಳನ್ನು ತೆರೆಯಲಾಗಿರುವುದಿಲ್ಲ. 2022-23ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ 103ರನ್ವಯ ರಾಜ್ಯದಲ್ಲಿ ನೂತನವಾಗಿ ಈ ಕೆಳಕಂಡಂತೆ 07 ಹೊಸ ವಿಶ್ವವಿದ್ಯಾಲಯಗಳನ್ನು 2023ರಲ್ಲಿ ಸ್ಥಾಪನೆ ಮಾಡಲಾಗಿರುತ್ತದೆ. |

| ಕ್ರ. ಸಂ. | ಹೊಸ ವಿಶ್ವವಿದ್ಯಾಲಯಗಳು | ಮಾತೃ ವಿಶ್ವವಿದ್ಯಾಲಯ |
|---|---|---|
| 1 | ಹಾಸನ ವಿ.ವಿ. | ಮೈಸೂರು ವಿ.ವಿ. |
| 2 | ಚಾಮರಾಜನಗರ ವಿ.ವಿ | ಮೈಸೂರು ವಿ.ವಿ. |
| 3 | ಕೊಡಗು ವಿವಿ | ಮಂಗಳೂರು ವಿ.ವಿ. |

| | | |
|---|---|---|
| 4 | ಬೀದರ್ ವಿವಿ. | ಗುಲ್ಬರ್ಗಾ ವಿ.ವಿ. |
| 5 | ಹಾವೇರಿ | ಕರ್ನಾಟಕ ವಿಶ್ವವಿದ್ಯಾ ಧಾರವಾಡ |
| 6 | ಬಾಗಲಕೋಟೆ | ರಾಣಿ ಚನ್ನಮ್ಮ ವಿ.ವಿ., ಬೆಳಗಾವಿ. |
| 7 | ಕೊಪ್ಪಳ | ವಿಜಯನಗರ ಶ್ರೀ ಕೃಷ್ಣದೇವರಾಯ |

ಈ ವಿಶ್ವವಿದ್ಯಾನಿಲಯಗಳನ್ನು ಈ ಕೆಳಕಂಡ ಷರತ್ತು /ಮಾನದಂಡಗಳನ್ವಯ ಪ್ರಾರಂಭಿಸಲಾಗಿರುತ್ತದೆ.

- ಈ ವಿಶ್ವವಿದ್ಯಾಲಯಗಳ ಸ್ಥಾಪನೆಗಾಗಿ ಯಾವುದೇ ಜಮೀನನ್ನಾಗಲಿ, ವಾಹನವನ್ನಾಗಿ ಖರೀದಿಸುವಂತಿಲ್ಲ ಹಾಗೂ ಹೊಸ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಈಗಾಗಲೇ ಮಾತೃ ವಿಶ್ವವಿದ್ಯಾಲಯ ಮಂಜೂರಾಗಿರುವ ಹುದ್ದೆಗಳಲ್ಲಿ ಅವಶ್ಯ ಹುದ್ದೆಗಳನ್ನು ಬಳಸಿಕೊಳ್ಳುವುದು ಹಾಗೂ ಯಾವುದೇ ಹೊಸ ಹುದ್ದೆಗಳನ್ನು ಸೃಜಿಸುವಂತಿಲ್ಲ.
- ಈ ವಿಶ್ವವಿದ್ಯಾನಿಲಯಗಳು ಸಂಪೂರ್ಣವಾಗಿ digital Entrepreneurial (ಕೌಶಲ್ಯಾಧಾರಿತ) "Earn while you learn" ಮಾದರಿಯಂತೆ ಕಾರ್ಯನಿರ್ವಹಿಸುವುದು.
- ಈ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸಂಪನ್ಮೂಲಗಲನ್ನು ಬಳಸಿ ವಿನೂತನ ಮಾದರಿಯಂತೆ ಕಾರ್ಯನಿರ್ವಹಿಸುವುದು.

| | | |
|---|---|---|
| (ಉ) | ಅಂತಹ ಕೆಲವು ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಸರ್ಕಾರ ತೀರ್ಮಾನಿಸಿದೆಯೇ; ಹಾಗಿದ್ದಲ್ಲಿ ಯಾವ ಮಾನದಂಡಗಳ ಮೇಲೆ ಈ ತೀರ್ಮಾನ ತೆಗೆದುಕೊಳ್ಳಲಾಗುತ್ತಿದೆ.; (ವಿವರ ನೀಡುವುದು) | ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ದಿನಾಂಕ: 13.02.2025 ಮತ್ತು 09.05.2025ರಂದು ಸಭೆಗಳನ್ನು ನಡೆಸಿದ್ದು, ಇಲ್ಲಿಯವರೆಗೆ ಯಾವುದೇ ಶಿಫಾರಸ್ಸುಗಳನ್ನು ನೀಡಿರುವುದಿಲ್ಲ. ಸದರಿ ಸಮಿತಿಯು ನೀಡುವ ಶಿಫಾರಸ್ಸುಗಳನ್ನು ಪರಿಶೀಲಿಸಿ, ಸಚಿವ ಸಂಪುಟದ ಮುಂದೆ ಮಂಡಿಸಿ ವಿಶ್ವವಿದ್ಯಾಲಯಗಳು ಶೈಕ್ಷಣಿಕವಾಗಿ ಹಾಗೂ ಆಡಳಿತಾತ್ಮಕವಾಗಿ ಸದೃಢಗೊಳ್ಳಲು ಅಗತ್ಯ ಕ್ರಮವನ್ನು ಕೈಗೊಳ್ಳಲಾಗುತ್ತದೆ. |
| ಊ) | ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಆಯಾ ಜಿಲ್ಲೆಯಲ್ಲಿ ಸರ್ಕಾರಿ ಜಮೀನು ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯವಿರುವ ವಿಶ್ವವಿದ್ಯಾನಿಲಯಗಳನ್ನು ಮುಂದುವರಿಸಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರ ನೀಡುವುದು) | |

**ಸಂಖ್ಯೆ: ಇಡಿ/383/ಯುಆರ್ ಸಿ /2025**

**(ಡಾ|| ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು.